# Prime Minister’s meeting with Prime Minister of Japan

September 27, 2022

## ಜಪಾನ್ ಪ್ರಧಾನಿ ಅವರನ್ನು ಭೇಟಿ ಮಾಡಿದ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ

ಸೆಪ್ಟೆಂಬರ್ 27, 2022

ಜಪಾನ್ ಪ್ರಧಾನಿ ಗೌರವಾನ್ವಿತ ಶ್ರೀ ಫುಮಿಯೋ ಕಿಶಿದಾ ಅವರನ್ನು ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಭೇಟಿ ಮಾಡಿ ದ್ವಿಪಕ್ಷೀಯ ಸಮಾಲೋಚನೆ ನಡೆಸಿದರು. ಜಪಾನ್ ಮಾಜಿ ಪ್ರಧಾನಿ ಶಿಂಜೋ ಅಬೆ ಅವರ ನಿಧನಕ್ಕೆ ಪ್ರಧಾನಮಂತ್ರಿ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದರು. ಭಾರತ – ಜಪಾನ್ ಸಹಭಾಗಿತ್ವವನ್ನು ಬಲಪಡಿಸುವುದಲ್ಲದೇ ಭಾರತ – ಫೆಸಿಫಿಕ್ ವಲಯದಲ್ಲಿ ಸ್ವಾಯತ್ತ, ಮುಕ್ತ ಮತ್ತು ಎಲ್ಲವನ್ನೊಳಗೊಂಡ ಪರಿಕಲ್ಪನೆಯನ್ನು ಸಾಕಾರಗೊಳಿಸಲು ಮಾಜಿ ಪ್ರಧಾನಿ ಅಬೆ ಅವರು ನೀಡಿದ ಕೊಡುಗೆಯನ್ನು ಈ ಸಂದರ್ಭದಲ್ಲಿ ಉಲ್ಲೇಖಿಸಿದರು.

2.ದ್ವಿಪಕ್ಷೀಯ ಬಾಂಧವ್ಯವನ್ನು ಮತ್ತಷ್ಟು ಆಳಗೊಳಿಸುವ ಕುರಿತು ಉಭಯ ನಾಯಕರು ಫಲಪ್ರದವಾಗಿ ಅಭಿಪ್ರಾಯ ವಿನಿಮಯ ಮಾಡಿಕೊಂಡರು. ಹಲವಾರು ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಚರ್ಚಿಸಿದರು. ಭಾರತ – ಜಪಾನ್ ವಿಶೇಷ ಕಾರ್ಯತಂತ್ರ ಮತ್ತು ಜಾಗತಿಕ ಪಾಲುದಾರಿಕೆ ಹಾಗೂ ಹಲವಾರು ಅಂತರರಾಷ್ಟ್ರೀಯ ಗುಂಪುಗಳು ಮತ್ತು ಸಂಸ್ಥೆಗಳ ಕುರಿತಂತೆಯೂ ಈ ನಾಯಕರು ಚರ್ಚಿಸಿದರು.

ಟೋಕಿಯೋ
ಸೆಪ್ಟೆಂಬರ್ 27, 2022

DISCLAIMER: This is an approximate translation. The original is available in English on MEA’s website and may be referred to as the official press release.